ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 13 ಸೇವನೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 05.05.2022.

## ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012, ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 22.03.2022ರ ಅಧಿಸೂಚನೆ ಸಂಖ್ಯೆ: ಸಿಆಸುಇ 13 ಸೇವನೆ 2022 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 22.03.2022ರ ಕರ್ನಾಟಕ ರಾಜ್ಯಪತ್ರದ ಭಾಗ IV-ಎ ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 22.03.2022ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಸ್ವೀಕೃತವಾಗಿರುವ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಶೀಲಿಸಿರುವುದರಿಂದ;

ಈಗ, ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ 3ನೇ ಪ್ರಕರಣದ (1) ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

1. ಶೀರ್ಷಿಕೆ ಮತ್ತು ಪ್ರಾರಂಭ:- (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು 2022 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

...2

2. ನಿಯಮ 2ಕ್ಕೆ ತಿದ್ದುಪಡಿ:- ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರ (ಇದರಲ್ಲಿ ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗಿದೆ) ನಿಯಮ 2ರಲ್ಲಿ "ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ " ಎಂಬ ಪದಗಳ ಬದಲಿಗೆ "ದಿನಾಂಕ: 31.12.2022ರೊಳಗೆ " ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

3. ನಿಯಮ 3ಕ್ಕೆ ತಿದ್ದುಪಡಿ :- ಸದರಿ ನಿಯಮಗಳ ನಿಯಮ 3ರಲ್ಲಿ,-

(ಎ) ಉಪನಿಯಮ (1)ರಲ್ಲಿ "ಯಾವುದೇ ಸರ್ಕಾರಿ ನೌಕರನು, ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ಮುಂಬಡ್ತಿಗೆ ಅರ್ಹನಾಗತಕ್ಕದ್ದಲ್ಲ. ಯಾವುದೇ ಸರ್ಕಾರಿ ನೌಕರನು, ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹನ್ನೊಂದು ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ವಾರ್ಷಿಕ ವೇತನ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ" ಎಂಬ ಪದಗಳ ಬದಲಿಗೆ "ಯಾವುದೇ ಸರ್ಕಾರಿ ನೌಕರನು ದಿನಾಂಕ: 31.12.2022ರೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ಮುಂಬಡ್ತಿ ಮತ್ತು ವಾರ್ಷಿಕ ವೇತನ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ಬಿ) ಉಪ ನಿಯಮ (2)ರಲ್ಲಿ "ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ" ಎಂಬ ಪದಗಳ ಬದಲಿಗೆ "ದಿನಾಂಕ: 31.12.2022 ರೊಳಗೆ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

05/05/2022

(ತೇಜಾವತಿ.ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-ವಿಶೇಷ ಕೋಶ).

5/5/2022

ಇವರಿಗೆ:

ಸಂಕಲನಕಾರರು, ಕರ್ನಾಟಕ ಇ-ರಾಜ್ಯಪತ್ರ.

<u>ಪ್ರತಿ:</u>

1. ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.

...3.

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:221:ಕಂಸಾಪ/2015-16/ಸೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 13.06.2022

ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/13/ಸೇವನೆ/2022, ದಿನಾಂಕ:05.05.2022ನ್ನು ಈ ಕೆಳಕಂಡವರುಗಳ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

13/06/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ:

1) ಜಂಟಿ ನಿರ್ದೇಶಕರುಗಳು, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ – ಮಾಹಿತಿಗಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ
3) ಮಾಹಿತಿ ಅಧಿಕಾರಿ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4) ಕೇಂದ್ರ ಕಛೇರಿಯ ಎಲ್ಲಾ ವಿಭಾಗದ ಮ್ಯಾನೇಜರ್/ಅಧೀಕ್ಷಕರುಗಳು–ಮಾಹಿತಿಗಾಗಿ.
5) ಕಚೇರಿ ಪ್ರತಿ